## ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀಮತಿ ಭಾರತಿ ಶೆಟ್ಟಿ ರವರು ನಿಯಮ 72 ರಡಿ ಮಂಡಿಸಿರುವ ಗಮನ ಸೆಳೆಯುವ ಸೂಚನೆಗೆ ಸನ್ಮಾನ್ಯ ಮುಖ್ಯ ಮಂತ್ರಿಯವರ ಹೇಳಿಕೆ:

**ಸೂಚನೆ**

ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆ, ನಾಗರಹೊಳೆ ಶಾಲೆಗೆ ಮೂಲಭೂತ ಸೌಕರ್ಯ ಒದಗಿಸುವುದು ಹಾಗೂ ಬುಡಕಟ್ಟು ಜನಾಂಗದ ಬಡ ಮಕ್ಕಳು ಶಿಕ್ಷಣದಿಂದ ವಂಚಿತರಾಗದಂತೆ ತಡೆಗಟ್ಟುವ ನಿಟ್ಟಿನಲ್ಲಿ ಸರ್ಕಾರ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲು ನಿಯಮ 72ರ ಮೇರೆಗೆ ವಿಷಯ ಪ್ರಸ್ತಾಪಿಸಿ ಸಂಬಂಧಪಟ್ಟ ಸಚಿವರ ಗಮನ ಸೆಳೆಯಬಯಸುತ್ತೇನೆ.

**ಉತ್ತರ**

- ಕೊಡಗು ಜಿಲ್ಲೆ, ಪೊನ್ನಂಪೇಟೆ ತಾಲ್ಲೂಕು, ನಾಗರಹೊಳೆ ಇಲ್ಲಿ ಕಾರ್ಯನಿರ್ವಹಿಸುತ್ತಿರುವ ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಯನ್ನು 1961ನೇ ಸಾಲಿನಲ್ಲಿ ಪ್ರಾರಂಭಿಸಲಾಗಿರುತ್ತದೆ. ಸದರಿ ಶಾಲೆಯನ್ನು 1 ರಿಂದ 7ನೇ ತರಗತಿಯವರೆಗೆ ನಡೆಸಲಾಗುತ್ತಿದ್ದು 280 ಮಂಜೂರಾತಿ ಸಂಖ್ಯೆಗೆ 94 ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ. ಪ್ರವೇಶ ಪಡೆದ ವಿದ್ಯಾರ್ಥಿಗಳಿಗೆ ವಾರ್ಷಿಕ ರೂ.18.09 ಲಕ್ಷಗಳ ವೆಚ್ಚ ಭರಿಸಲಾಗಿದೆ.
- ಸದರಿ ಶಾಲೆಯು ಹುಲಿ ಸಂರಕ್ಷಿತ ಪ್ರದೇಶದ ವ್ಯಾಪ್ತಿಯಲ್ಲಿರುವುದರಿಂದ ನೂತನ ಕಟ್ಟಡ ನಿರ್ಮಾಣಕ್ಕೆ ಅರಣ್ಯ ಇಲಾಖೆಯು ಅನುಮತಿ ನೀಡಿರುವುದಿಲ್ಲ. ಆದ್ದರಿಂದ ಹಾಲಿ ಇರುವ ಶಾಲಾ ಕಟ್ಟಡವನ್ನು ದುರಸ್ಥಿಗೊಳಿಸಲು ಪ್ರಧಾನ ಮಂತ್ರಿ ಆದಿ ಆದರ್ಶ ಗ್ರಾಮ ಯೋಜನೆಯಡಿ ರೂ.7.40 ಲಕ್ಷಗಳನ್ನು ನಿಗಧಿಪಡಿಸಿಕೊಂಡು ದುರಸ್ಥಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ.
- 2024-25ನೇ ಸಾಲಿನ ಆಯವ್ಯಯ ಘೋಷಣೆಯಂತೆ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 1 ರಿಂದ 5ನೇ ತರಗತಿಯ ಶಾಲೆಗಳಲ್ಲಿ 6ನೇ ತರಗತಿ ಹಾಗೂ 1 ರಿಂದ 7ನೇ ತರಗತಿಯ ಶಾಲೆಗಳಲ್ಲಿ 8ನೇ ತರಗತಿಯನ್ನು ಹೊಸದಾಗಿ ಪ್ರಾರಂಭಿಸಲಾಗಿರುತ್ತದೆ.
- 2025-26ನೇ ಆಯವ್ಯಯದಲ್ಲಿ ಬುಡಕಟ್ಟು ಜನಾಂಗದ ಶೈಕ್ಷಣಿಕ ಉದ್ದೇಶಕ್ಕಾಗಿ 78 ಬುಡಕಟ್ಟು ವಸತಿ ಶಾಲೆಗಳಲ್ಲಿ 2025-26ನೇ ಸಾಲಿನಿಂದ 7ನೇ ತರಗತಿಯನ್ನು ಹಾಗೂ ಚಾಮರಾಜನಗರ, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿನ ಐದು ವಸತಿ ಶಾಲೆಗಳನ್ನು 12ನೇ ತರಗತಿಯವರೆಗೆ ಮೇಲ್ದರ್ಜೆಗೇರಿಸಲಾಗುವುದು ಎಂದು ಘೋಷಿಸಲಾಗಿರುತ್ತದೆ.
- ಇಲಾಖಾವತಿಯಿಂದ ಒಟ್ಟಾರೆ 119 ಮಹರ್ಷಿ ವಾಲ್ಮೀಕಿ ಆದಿವಾಸಿ ಬುಡಕಟ್ಟು ವಸತಿ ಶಾಲೆಗಳು ಕಾರ್ಯನಿರ್ವಹಿಸುತ್ತಿದ್ದು, 2024-25ನೇ ಸಾಲಿನಲ್ಲಿ ಸದರಿ ಶಾಲೆಗಳ ನಿರ್ವಹಣೆಗಾಗಿ ರೂ.3762.00 ಲಕ್ಷಗಳ ವೆಚ್ಚ ಭರಿಸಲಾಗಿದೆ.

STW/SECB/STP/132/2025

(ಸಿದ್ದರಾಮಯ್ಯ)
ಮುಖ್ಯ ಮಂತ್ರಿ